I/197456/2021

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/90/ಸಿಡಿಸಿ(2)/2021-22

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿನಾಂಕ:08/12/2021.

<u>ಸುತ್ತೋಲೆ</u>

ವಿಷಯ: ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಬೋಧಕ ವರ್ಗದವರ ಉನ್ನತ ವ್ಯಾಸಂಗದ ವಿವರಗಳನ್ನು dtetech ಪೋರ್ಟಲ್‌ನಲ್ಲಿ ನಮೂದಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉನ್ನತ ವ್ಯಾಸಂಗ ಮಾಡುತ್ತಿರುವ/ಈಗಾಗಲೇ ಪೂರ್ಣಗೊಳಿಸಿರುವ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್/ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಬೋಧಕ ವರ್ಗದವರ ಉನ್ನತ ವ್ಯಾಸಂಗದ ವಿವರಗಳನ್ನು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್ ಪೋರ್ಟಲ್ https://dtetech.karnataka.gov.in/dteone/emp/login.aspx ನಲ್ಲಿ ಸಲ್ಲಿಸಲು ತಿಳಿಸಲಾಗಿದೆ.

ಹಾಗೆಯೇ ಹಾಲಿ ಉನ್ನತ ವ್ಯಾಸಂಗಕ್ಕೆ ನಿಯೋಜನೆ ಹೊಂದಿದವರ ವ್ಯಾಸಂಗದ ಶೈಕ್ಷಣಿಕ ಪ್ರಗತಿಯ ವಿವರಗಳನ್ನು ನಿಯಮಾನುಸಾರ ಪ್ರತಿ 6 ತಿಂಗಳಿಗೊಮ್ಮೆ ಪ್ರಾಂಶುಪಾಲರುಗಳು ಪೋರ್ಟಲ್‌ನಲ್ಲಿ ಸಲ್ಲಿಸಲು ಹಾಗೂ ಸದರಿ ಉಪನ್ಯಾಸಕರು/ಸಹಾಯಕ ಪ್ರಾಧ್ಯಾಪಕರು ನಿಯಮಾನುಸಾರ ಉನ್ನತ ವ್ಯಾಸಂಗದಲ್ಲಿ ಸಾಕಷ್ಟು ಪ್ರಗತಿಯನ್ನು ತೋರಿಸಿಲ್ಲ ಅಥವಾ ಸೂಕ್ತ ಕಾಲದೊಳಗೆ ವ್ಯಾಸಂಗವನ್ನು ಪೂರ್ಣಗೊಳಿಸದಿದ್ದ ಪಕ್ಷದಲ್ಲಿ ಇಲಾಖೆಯ ಕೇಂದ್ರ ಕಛೇರಿಗೆ ವರದಿ ಮಾಡಲು ಸಹ ಸೂಚಿಸಲಾಗಿದೆ.

ನಿರ್ದೇಶಕರು.

ಪ್ರತಿ:

1. ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಇಂಜಿನಿಯರಿಂಗ್/ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗಕ್ಕೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.